Aadi lakshmi devige aarathiya yetire

ಆದಿಲಕ್ಷ್ಮಿ ದೇವಿಗೆ ಆರತಿಯ ಎತ್ತಿರೆ
ಅರಿಶಿನ ಕುಂಕುಮ ಹಚ್ಚಿ ಹೂಮಾಲೆ ಹಾಕಿರೆ
ಧಾನ್ಯಲಕ್ಷ್ಮಿಗೆ ನೀವು ಧೂಪ ದೀಪ ಹಚ್ಚಿರೆ
ಕನಕಲಕ್ಷ್ಮಿಗೆ ನೀವು ನೈವೇದ್ಯವ ತನ್ನಿರೆ

ಬಲದ ಕಾಲು ಮುಂದೆ ಇಟ್ಟು ಹೊಸಿಲು ದಾಟಿ ಬಾರಮ್ಮ
ಭಾಗ್ಯ ತಾಯಿ ಮಾಂಗಲ್ಯ ಸೌಭಾಗ್ಯವ ನೀಡಮ್ಮ
ಹಾಲು ತುಪ್ಪ ಹೊಳೆ ಹರಿಸಿ ಹರುಷ ಸುಖವ ತಾರಮ್ಮ
ಧನ ಧಾನ್ಯವ ಕೊಟ್ಟು ಸಂತಾನ ಕರುಣಿಸಮ್ಮ

ಕ್ಷೀರಾಬ್ಧಿತನಯೇ ಆನಂದನಿಲಯೆ ವಿಷ್ಣುಪ್ರಿಯೆ ಬಾರೆ
ಕಮಲನಯನೆ ನಿಜ ಕಮಲವದನೆ ಕಮಲಾಕ್ಷವಲ್ಲಭೆ ಬಾರೆ
ಪುಷ್ಪಸುಗಂಧಿನಿ ಹರಿಣವಿಲೋಚನಿ ಕರುಣೆಯನ್ನು ತೋರೇ
ಅನಂತರೂಪಿಣಿ ಚಿರಸುಖದಾಯಿನಿ ಇಷ್ಟಾರ್ಥವನೇ ತಾರೆ

Aadhi Lakshmi Devige aaratiya ethire
arishina kumkuma hacchi hoomaale haakire
Dhaanyalakshmige neevu dhoopa deepa hacchire
Kanakalakshmige neevu naivedyava thannire

Baladha kaalu mundhe ittu hosilu daati baaramma
Bhaagya thaayi maangalya sowbhaagyava needamma
haalu tuppa hoLe harisi harusha sukava thaaramma
dhana dhaanyava kottu santhaana karunisamma

Ksheeraabdithanaye aanandanilaye vishnupriye baare
kamalanayane nija kamalavadhane kamalaakshavallabhe baare
pushpasugandhini hariNavilochani karuNeyannu thore
anantharoopiNi chirasukhadaayini ishtaarthavane thaare